# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
# ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 06(ಥಣಿಸಂದ್ರ)
## ವಾರ್ಡ್‌ಸಮಿತಿ ಸಭೆ, ದಿನಾಂಕ: 06.02.2021 ರ
## ಸಭಾ ನಡುವಳಿ

ದಿನಾಂಕ: 06.02.2021 ರಂದು ಬೆಳ್ಳಿಗೆ 11.00 ಗಂಟೆಗೆ ವಾರ್ಡ್ ನಂ.06 ಥಣಿಸಂದ್ರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಬಿಬಿಎಂಪಿ ಸಮುದಾಯ ಭವನ, ಹೆಗಡೆನಗರ, 2ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ ಇಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಎಸ್ ಶ್ರೀಧರ್ | ನೋಡಲ್ ಅಧಿಕಾರಿ, ವಾರ್ಡ್ ನಂ. 06(ಥಣಿಸಂದ್ರ) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು ಬ್ಯಾಟರಾಯನಪುರ ಉಪ ವಿಭಾಗ |
| 2 | ಶ್ರೀ ಸುರೇಶ್ ದೇವತ್‌ರಾಜ್ | ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ, ವಾರ್ಡ್ ಸಮಿತಿ, ವಾರ್ಡ್ ನಂ. 06 (ಥಣಿಸಂದ್ರ) |
| 3 | ಶ್ರೀಮತಿ ಡಾ॥ ಕೇಶವವಾಣಿ | ಆರೋಗ್ಯ ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ, ಹೆಗಡೆನಗರ |
| 4 | ಶ್ರೀ ನಲತ್‌ವಾಡ್ | ಸಹಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ (ಯೋಜನೆ) |
| 5 | ಶ್ರೀ ವೇಣುಪ್ರಿಯ ಎಸ್ | ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ |
| 6 | ಕೆ.ಆರ್ ಗಂಗಾಧರಯ್ಯ | ಬೆಸ್ಕಾಂ ವಿಭಾಗ, ದಾಸರಹಳ್ಳಿ |

ಶ್ರೀ ಸುರೇಶ್ ದೇವತ್‌ರಾಜ್, ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ವಾರ್ಡ್ ಅಭಿಯಂತರರು ವಾರ್ಡ್ ನಂ. 06 ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು, ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

1. **ಕೋವಿಡ್–19ರ ಸಂಬಂಧ ಮುಜಾಗೃತ ಕ್ರಮಗಳ ಬಗ್ಗೆ**. ವಾರ್ಡ್ ಸ.ಅ ರವರು ಮಾತನಾಡಿ ಡಾ॥ ಕೇಶವವಾಣಿ ರವರು ವಾರ್ಡ್ ವ್ಯಾಪ್ತಿಯಲ್ಲಿ ವಾರಿಯರ್ಸ್‌ಗಳಿಗೆ ಲಸಿಕೆ ನೀಡುವ ಕೆಲಸದಲ್ಲಿ ತೊಡಗಿಸಿಕೊಂಡಿರುವುದರಿಂದ ಸದರಿ ಸಭೆಗೆ ಗೈರುಹಾಜರಾಗಿರುತ್ತಾರೆಂದು ಸಭೆಗೆ ತಿಳಿಸಿದರು.
2. **ದಾಸಪ್ಪ, ಸಂಯುಕ್ತ ಗೆಳೆಯರ ಬಳಗ ಹೆಗಡೆನಗರ:** ರವರು ಮಾತನಾಡಿ ಶಬರಿನಗರ ಮುಖ್ಯರಸ್ತೆಯಲ್ಲಿ ಚರಂಡಿ ನಿರ್ಮಾಣ ಕಾಮಗಾರಿಯನ್ನು ಯಲಹಂಕ ವಲಯ ಯೋಜನಾ ವಿಭಾಗದ ವತಿಯಿಂದ ನಿರ್ವಹಿಸಲಾಗುತ್ತಿದ್ದು, ಶೀಘ್ರವಾಗಿ ಪೂರ್ಣಗೊಳಿಸಲು ಕೋರಿದರು. ಕುಡಿಯುವ ನೀರಿನ ಸಮಸ್ಯೆ ಬಗ್ಗೆ ವಿಶೇಷ ಗಮನ ಹರಿಸಲು ಕೋರಿದರು, ಕೆಲವು ಜಾಗಗಳಲ್ಲಿ ಬೀದಿ ದೀಪಗಳು ಮನೆಕಡೆ

ತಿರುಗಿಸಲಾಗುತ್ತಿದ್ದು, ಇದರ ಬಗ್ಗೆ ವಿದ್ಯುತ್ ನಿರ್ವಹಣೆ ಮಾಡುತ್ತಿರುವವರು ಪರಿಶೀಲಿಸಿ ಕ್ರಮ ವಹಿಸಬೇಕಾಗಿ ಕೋರಿದರು ಹಾಗೂ ಅನ್ನಪೂರ್ಣೇಶ್ವರಿ ಹೋಟೆಲ್ ಹತ್ತಿರ ಬೀದಿ ದೀಪ ದುರಸ್ಥಿ ಮಾಡಲು ಕೋರಿದರು.

3. ವೆಂಕಟೇಶ್, ಸಂಯುಕ್ತ ಗೆಳೆಯರ ಬಳಗ ರವರು ಮಾತನಾಡಿ ಹೆಗಡೆನಗರ ಪೂರ್ವ ಭಾಗದಲ್ಲಿ ಒಳಚರಂಡಿ ಕಾಮಗಾರಿ ಬಾಕಿ ಇರುವುದಾಗಿ ಹಾಗೂ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುವುದಾಗಿ ಸಭೆಗೆ ತಿಳಿಸಿದರು.

4. **ಶ್ರೀನಿವಾಸ್‌ರಾವ್** ಅಮರಜ್ಯೋತಿ ಬಡಾವಣೆ ರವರು ಮಾತನಾಡಿ ಈಗಾಗಲೇ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯ ಅಧಿಕಾರಿಗಳೊಂದಿಗೆ ಹೊಸದಾಗಿ ಅಳವಡಿಸಲಾಗುತ್ತಿರುವ ಒಳಚರಂಡಿ ವ್ಯವಸ್ಥೆಯ ಬಗ್ಗೆ ಚರ್ಚಿಸಲಾಗಿದ್ದು, ಪ್ರತ್ಯೇಕವಾಗಿ ಎಸ್.ಟಿ.ಪಿ ಅಳವಡಿಸುವವರೆಗೆ ಮನೆ ಮನೆಗಳಿಗೆ ಒಳಚರಂಡಿ ಸಂಪರ್ಕ ಕಲ್ಪಿಸಲು ಆಗುವುದಿಲ್ಲ ಎಂಬ ಸ್ಪಷ್ಟತೆ ಮನವರಿಕೆಯಾಗಿರುತ್ತದೆ. ಈಗಾಗಲೇ ಒಳಚರಂಡಿಯ ಕೊಳವೆಗಳನ್ನು ಅಳವಡಿಸಿರುವ ರಸ್ತೆಗಳನ್ನು ಕೂಡಲೇ ಅಭಿವೃದ್ದಿಪಡಿಸಿ ಡಾಂಬರೀಕರಣ ಮಾಡಲು ಕೋರಿದರು. ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಕೂಡಲೇ ಎಸ್.ಟಿ.ಪಿ ನಿರ್ಮಾಣ ಕಾಮಗಾರಿ ಕೈಗೊಳ್ಳಬೇಕಾಗಿ ಕೋರಿದರು.

   ಈ ಬಗ್ಗೆ ಸ.ಕಾ.ಅ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರು ಮಾತನಾಡಿ ಗೆದ್ದಲಹಳ್ಳಿಯಲ್ಲಿ 20 ಎಂ.ಎಲ್.ಡಿ ಎಸ್.ಟಿ.ಪಿ ಯನ್ನು ವಾರ್ಡ್ ನಂ. 06 ಹಾಗೂ ವಾರ್ಡ್ ನಂ. 25ರ ಭಾಗಶಃ ಪ್ರದೇಶಕ್ಕಾಗಿ ನಿರ್ಮಿಸಲು ಉದ್ದೇಶಿಸಲಾಗಿದ್ದು, ಎಸ್.ಟಿ.ಪಿ ನಿರ್ಮಾಣಕ್ಕೆ ಸುಮಾರು 24 ತಿಂಗಳು ಕಾಲವಕಾಶ ಬೇಕಾಗಿರುತ್ತದೆ. ವಾರ್ಡ್ ಅಭಿಯಂತರರೊಂದಿಗೆ ಪ್ರತಿ ದಿನ ಸಂಪರ್ಕದಲ್ಲಿದ್ದು, ಈಗಾಗಲೇ ಅಮರಜ್ಯೂತಿ ಬಡಾವಣೆಯಲ್ಲಿ ಒಳಚರಂಡಿ ಕಾಮಗಾರಿ ಪೂರ್ಣಗೊಂಡಿರುವುದರಿಂದ ರಸ್ತೆಗಳಿಗೆ ಡಾಂಬರೀಕರಣ ಬಿ.ಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಕೈಗೊಳ್ಳಬಹುದಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

5. **ಪ್ರಶಾಂತಿನಗರ ನಿವಾಸಿ** ರವರು ಮಾತನಾಡಿ ಕಾವೇರಿ ಕುಡಿಯುವ ನೀರಿನ ಕೊಳವೆಯನ್ನು ಬಿ.ಡಬ್ಲ್ಯೂ.ಎಸ್.ಎಸ್‌ಬಿ ರವರು ಈಗಾಗಲೇ ಅಳವಡಿಸಿರುತ್ತಾರೆ. ಒಳಚರಂಡಿ ಕಾಮಗಾರಿ ಬಾಕಿ ಇರುವುದಾಗಿ ತಿಳಿಸಿದರು ಇದಕ್ಕೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸ.ಕಾ.ಅ ರವರು ಮಾತನಾಡಿ ಕಾವೇರಿ ಪೈಪ್ ಅಳವಡಿಸಿದ ನಂತರ ಬಿಬಿಎಂಪಿರವರು ರಸ್ತೆಗಳಿಗೆ ಡಾಂಬರೀಕರಣ ಮಾಡಿದ್ದು, ಎಸ್.ಟಿ.ಪಿ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ಇನ್ನು ಸುಮಾರು ಎರಡು ವರ್ಷಗಳು ಬೇಕಾಗಿರುವುದರಿಂದ ಇತ್ತೀಚೆಗೆ ರಸ್ತೆ ಡಾಂಬರೀಕರಣ ಮಾಡಿರುವ ರಸ್ತೆಗಳಲ್ಲಿ ಕೊನೆಯ ಹಂತದಲ್ಲಿ ಒಳಚರಂಡಿಯ ಕೊಳವೆಗಳನ್ನು ಅಳವಡಿಸುವ ಕಾಮಗಾರಿ ಕೈಗೊಳ್ಳಲಾಗುವುದೆಂದು ತಿಳಿಸಿದರು.

6. ಪ್ರಶಾಂತ್‌ನಗರ ನಿವಾಸಿಗಳು ಸದರಿ ಸಭೆಗೆ ಮನವಿ ಪತ್ರ ನೀಡಿ ಮಾತನಾಡಿ ಪ್ರಶಾಂತ್‌ನಗರದಲ್ಲಿ ಒಳಚರಂಡಿ ಹಾಗೂ ಕುಡಿಯುವ ನೀರಿನ ಸರಬರಾಜು ಹಾಗೂ ಗ್ಯಾಸ್ ಪೈಪ್‌ಲೈನ್ ಅಳವಡಿಸುವ ಕಾಮಗಾರಿಯು ಬಹಳ ದಿನಗಳಿಂದ ಅಪೂರ್ಣವಾಗಿದ್ದು, ದಯವಿಟ್ಟು ಶೀಘ್ರವಾಗಿ ಪೂರ್ಣಗೊಳಿಸುವಂಥೆ ಕೋರಿದರು, ಹಾಗೂ ಸದರಿ ಬಡಾವಣೆಯಲ್ಲಿ ಘನತ್ಯಾಜ್ಯ ವಿಲೇವಾರಿ ಅಸಮರ್ಪಕವಾಗಿರುವುದರಿಂದ ಈ ಬಗ್ಗೆ ಕೂಡಲೇ ಕ್ರಮ ವಹಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಕೋರಿದರು, ಹಾಗೂ

ಸದರಿ ಬಡಾವಣೆಯಲ್ಲಿ ಮರದ ಕೊಂಬೆಗಳನ್ನು ಕತ್ತರಿಸಲು ಕೋರಿದರು ಹಾಗೂ ಪ್ರಶಾಂತಿನಗರ 2ನೇ, 3ನೇ ಮತ್ತು 4ನೇ ಅಡ್ಡರಸ್ತೆಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುವುದಾಗಿ ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡೆಲ್ ಅಧಿಕಾರಿಗಳು, ವಾರ್ಡ್ ಸಮಿತಿ ರವರು ಮಾತನಾಡಿ ಈವರೆವಿಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರಿಗಣಿಸಿ ಎಲ್ಲಾ ದೂರು ಸಲಹೆ ಮತ್ತು ಸೂಚನೆಗಳನ್ನು ಕಾರ್ಯರೂಪಕ್ಕೆ ತರಲು ಕಾರ್ಯೋನ್ಮುಖರಾಗುವಂತೆ ಸಭೆಯಲ್ಲಿ ಹಾಜರಿದ್ದ ಎಲ್ಲಾ ಇಲಾಖಾ ಅಧಿಕಾರಿಗಳಿಗೆ ಸೂಚಿಸುತ್ತಾ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

06/02/2021

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್‌ಸಮಿತಿ, ವಾರ್ಡ್ ನಂ. 06(ಥಣಿಸಂದ್ರ)

6/02/2021

ನೋಡೆಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 06, (ಥಣಿಸಂದ್ರ)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂಧ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.